ಕರ್ನಾಟಕ ಸರ್ಕಾರ

(ಕಂದಾಯ ಇಲಾಖೆ)

ಉಪತಹಶೀಲ್ದಾರವರ ನ್ಯಾಯಾಲಯ ನಾಡಕಛೇರಿ ಹೊಸಹಳ್ಳಿ

ಸಂ/ಕಂ/ಹ.ಬ./ನಾಕಹೊ/55/2012-13. ದಿನಾಂಕ:06-06-2016.

| ವಾದಿಗಳು | ಪ್ರತಿವಾದಿಗಳು |
|---|---|
| ಬಸಮ್ಮ ಗಂಡ ಲೇಟ್ ಯರ್ರಣ್ಣ<br>ಹೂಡೇಂ ಗ್ರಾಮ<br>ಕೂಡ್ಲಿಗಿ ತಾಲೂಕು | ಶಿವಮ್ಮ ಗಂಡ ಸಣ್ಣಮಲ್ಲಯ್ಯ<br>ಹೂಡೇಂ ಗ್ರಾಮ<br>ಕೂಡ್ಲಿಗಿ ತಾಲೂಕು |
| ಕೂಡ್ಲಿಗಿ ತಾಲೂಕು ಹೂಡೇಂ ಗ್ರಾಮದ ಸನಂ 336ಜಿ. ವಿಸ್ತೀರ್ಣ 0-22 ಸೆಂಟ್ಸು ಜಮೀನನ್ನು ಪೋತಿವಾರಸು ಪ್ರಕಾರ ಹಕ್ಕು ಬದಲಾವಣೆ ಮಾಡುವ ಬಗ್ಗೆ. | |

ಪ್ರಸ್ತಾವನೆ:

ಕೂಡ್ಲಿಗಿ ತಾಲೂಕು ಹೂಡೇಂ ಗ್ರಾಮದ ಸನಂ 336ಜಿ. ವಿಸ್ತೀರ್ಣ 0-22 ಸೆಂಟ್ಸು ಜಮೀನನ್ನು ಸದರಿ ಗ್ರಾಮದ ಬಸಮ್ಮ ಗಂಡ ಲೇಟ್ ಯರ್ರಣ್ಣ ಇವರು ಪೋತಿವಾರಸು ಪ್ರಕಾರ ಹಕ್ಕು ಬದಲಾವಣೆ ಮಾಡಲು ಕೋರಿ ಅರ್ಜಿ ಸಲ್ಲಿಸಿರುತ್ತಾರೆ. ಈ ಬಗ್ಗೆ ಗ್ರಾಮಲೆಕ್ಕಿಗರು ಹೂಡೇಂ ಇವರು ನಮೂನೆ-21 ನೋಟಿಸನ್ನು ದಿನಾಂಕ 28-06-2012 ರಂದು ಗ್ರಾಮದಲ್ಲಿ ಪ್ರಚೂರು ಪಡಿಸಿ ಹಾಗೂ ಸಂಬಂಧಪಟ್ಟವರಿಗೆ ಜಾರಿ ಮಾಡಲಾಗಿ ಸದರಿ ಗ್ರಾಮದ ಶಿವಮ್ಮ ಗಂಡ ಸಣ್ಣಮಲ್ಲಯ್ಯ ಇವರು ತಕರಾರು ಅರ್ಜಿ ಸಲ್ಲಿಸಿರುವ ಕಾರಣ ಈ ಪ್ರಕರಣವನ್ನು ಎಂ.ಆರ್.ನಂಬರ್: 69/2011-12. ದಿನಾಂಕ 25-07-2012 ರಲ್ಲಿ ವಿವಾದಾಸ್ಪದ ಪ್ರಕರಣವೆಂದು ಪರಿಗಣಿಸಿ ಮುಂದಿನ ಕ್ರಮಕ್ಕೆ ಈ ಕಾರ್ಯಾಲಯಕ್ಕೆ ಕಳುಹಿಸಿ ಕೊಟ್ಟಿರುತ್ತಾರೆ.

ಈ ಪ್ರಕರಣವನ್ನು ಈ ಕಾರ್ಯಾಲಯದಲ್ಲಿ ವಿಚಾರಣೆ ಮಾಡುವ ದಿಸೆಯಲ್ಲಿ ಉಭಯ ಪಕ್ಷದವರಿಗೂ ನೋಟಿಸ್ಸು ನೀಡಿ ದಿನಾಂಕ 17-09-2012 ರಿಂದ 06-06-2016 ರ ವರೆಗೆ ವಿಚಾರಣೆ ಮಾಡಲಾಯಿತು.

ವಿಚಾರಣೆ ಸಮಯದಲ್ಲಿ ಅರ್ಜಿದಾರರು ಮತ್ತು ತಕರಾರುದಾರರು ಹಾಗೂ ಅವರ ಪರ ನ್ಯಾಯಾವಾದಿಗಳು ಹಾಜರಾಗಿರುತ್ತಾರೆ. ಅರ್ಜಿದಾರರ ಪರ ನ್ಯಾಯಾವಾದಿಗಳು ಹೂಡೇಂ ಗ್ರಾಮದ ಸನಂ 336ಜಿ. ವಿಸ್ತೀರ್ಣ 0-22 ಸೆಂಟ್ಸು ಜಮೀನನ್ನು ಅರ್ಜಿದಾರರ ತಾತನವರಾದ ಕತ್ತಿ ಪಾಲಯ್ಯ ಇವರ ಹೆಸರಲ್ಲಿ ಲೆಕ್ಕ ದಾಖಲೆ ಪಟ್ಟಾ ಇರುತ್ತದೆ. ಇವರು ದಿನಾಂಕ 03-01-1981 ರಂದು ಹಾಗೂ ಅಜ್ಜಿ ಬೋರಮ್ಮ ಇವರು ದಿನಾಂಕ 09-04-1986 ರಂದು ಹಾಗೂ ಇನ್ನಿತರೇ ವಾರಸುದಾರರು ನಿಧನ ಹೊಂದಿರುತ್ತಾರೆ. ಕಾರಣ ಪೋತಿವಾರಸು ಹಕ್ಕಿನ ಪ್ರಕಾರ ಅರ್ಜಿದಾರರ ಹೆಸರಲ್ಲಿ ಹಕ್ಕು ಬದಲಾವಣೆ ಮಾಡಲು ಕೋರಿರುತ್ತಾರೆ.

ವಿಚಾರಣೆಯಲ್ಲಿ ತಕರಾರುದಾರರ ಪರ ನ್ಯಾಯಾವಾದಿಗಳು ಹಾಜರಾಗಿದ್ದು ಸದರಿ ವಿವಾದಿತ ಜಮೀನು ಕೂಡ್ಲಿಗಿಯ ಸಿವಿಲ್ ನ್ಯಾಯಾಲಯ ಓ.ಎಸ್.ನಂಬರ್: 70/2009 ರಲ್ಲಿ ವ್ಯಾಜ್ಯ ನಡೆದು ದಿನಾಂಕ 30-03-2012 ರಂದು ಪ್ರತಿವಾದಿಯ ಪರ ತಿರ್ಮಾನವಾಗಿರುತ್ತದೆ. ಕಾರಣ ಪೋತಿವಾರಸು ಪ್ರಕಾರ ಅರ್ಜಿದಾರರ ಹೆಸರಲ್ಲಿ ಹಕ್ಕು ಬದಲಾವಣೆ ಮಾಡಲು ನಮ್ಮ ತಕರಾರು ಇರುವುದಾಗಿ ಕೋರಿರುತ್ತಾರೆ.

ಮೇಲಿನ ಎಲ್ಲಾ ಅಂಶಗಳನ್ನು ಗಣನೆಗೆ ತೆಗೆದು ಕೊಂಡು ಸದರಿ ವಿವಾದಿತ ಜಮೀನಿನ ಕಂದಾಯ ಲೆಕ್ಕಗಳನ್ನು ಪರಿಶೀಲಿಸಿ ಅರ್ಜಿದಾರರ ಪರ ನ್ಯಾಯಾವಾದಿಗಳ ಹೇಳಿಕೆ ಮತ್ತು ತಕರಾರುದಾರರ ಪರ ನ್ಯಾಯಾವಾದಿಗಳ ಹೇಳಿಕೆಗಳನ್ನು ಕೇಳಿ ಸದರಿ ಜಮೀನಿನ ವಿವಾದವು ಸಿವಿಲ್ ಸ್ವರೂಪವಾಗಿರುವುದರಿಂದ ಈ ಕೆಳಗಿನಂತೆ ಈ ಆದೇಶ ಮಾಡಲಾಗಿದೆ.

## -:ಆದೇಶ:-

ಮೇಲೆ ವಿವರಿಸಿದ ಸಂದರ್ಭ ವಾಸ್ತುವಾಂಶ ಮತ್ತು ಕಾರಣಗಳಿಂದ ಕೂಡ್ಲಿಗಿ ತಾಲೂಕು ಹೂಡೇಂ ಗ್ರಾಮದ ಸನಂ 336ಜಿ. ವಿಸ್ತೀರ್ಣ 0-22 ಸೆಂಟ್ಸು ಜಮೀನಿನ ವಿವಾದವು ಸಿವಿಲ್ ಸ್ವರೂಪವಾಗಿದ್ದು ಮಾನ್ಯ ಸಿವಿಲ್ ನ್ಯಾಯಾಲಯದಲ್ಲಿ ಉಭಯರು ಪರಿಹಾರ ಕಂಡು ಕೊಳ್ಳಲು ಸೂಚಿಸುತ್ತಾ ಅರ್ಜಿದಾರರ ಕೋರಿಕೆಯನ್ನು ತಳ್ಳಿಹಾಕಿ ಯಥಾಸ್ಥಿತಿಯಂತೆ ಮುಂದುವರೆಸಲು ಆದೇಶಿಸಿ ಈ ಪ್ರಕರಣವನ್ನು ಈ ಕಾರ್ಯಾಲಯದಲ್ಲಿ ಈ ಹಂತದಲ್ಲಿ ಮುಕ್ತಾಯಗೊಳಿಸಲು ಆದೇಶಿಸಲಾಗಿದೆ.

ಈ ಆದೇಶವನ್ನು ಹೇಳಿ ಬರೆಯಿಸಿ ಬೆರಳಚ್ಚು ಮಾಡಿಸಿ ತಪ್ಪುಗಳನ್ನು ತಿದ್ದಿ ದಿನಾಂಕ 06-06-2016 ರಂದು ತೆರೆದ ನ್ಯಾಯಾಲಯದಲ್ಲಿ ಘೋಷಿಸಲಾಯಿತು.

ಉಪತಹಶೀಲ್ದಾರರು
ನಾಡಕಛೇರಿ ಹೊಸಹಳ್ಳಿ

ಇದರ ಪ್ರತಿಯನ್ನು:

1) ಅರ್ಜಿದಾರರಾದ ಬಸಮ್ಮ ಗಂಡ ಲೇಟ್ ... ಹೂಡೇಂ ಗ್ರಾಮ ಕೂಡ್ಲಿಗಿ ತಾಲೂಕು ಇವರ ಪರ ವಕೀಲರಾದ ಎ.ಶಿವರಾಜ್ ವಕೀಲರು ಕೂಡ್ಲಿಗಿ ಇವರ ದ್ವಾರ ಕಳುಹಿಸಿ ಕೊಡಲಾಗಿದೆ.
2) ತಕರಾರುದಾರರಾದ ಶಿವಮ್ಮ ಗಂಡ ಸಣ್ಣ ಮಲ್ಲಯ್ಯ ಹೂಡೇಂ ಗ್ರಾಮ ಕೂಡ್ಲಿಗಿ ತಾಲೂಕು ಇವರ ಪರ ವಕೀಲರಾದ ರಮೇಶ ಆರ್. ವಕೀಲರು ಕೂಡ್ಲಿಗಿ ಇವರ ದ್ವಾರ ಕಳುಹಿಸಿ ಕೊಡಲಾಗಿದೆ.
3) ಗಣಕೀಕರಣ ವಿಭಾಗ ತಾಲೂಕು ಕಛೇರಿ ಕೂಡ್ಲಿಗಿ ಇವರ ಮುಂದಿನ ಕ್ರಮಕ್ಕಾಗಿ ಕಳುಹಿಸಿ ಕೊಡಲಾಗಿದೆ.
4) ಅಪೀಲು ಅವಧಿ 60 ದಿವಸ ಇರುತ್ತದೆ.